## ಕರ್ನಾಟಕ ಸರ್ಕಾರ

ಸಂಖ್ಯೆ: ಮಮಅ/166/ಪಿಹೆಚ್‌ಪಿ/2004

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 05-05-2004

## ಸುತ್ತೋಲೆ

ವಿಷಯ: ಅಂಗವಿಕಲತೆ ವಿಷಯಕ್ಕೆ ಸಂಬಂಧಪಟ್ಟ ಕಡತಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡುವ ಬಗ್ಗೆ.

ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ; ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ, 1995ರ ಪ್ರಕಾರ ಅಂಗವಿಕಲರಿಗೆ ಸಮಾನ ಅವಕಾಶಗಳನ್ನು ನೀಡಿ ಅವರು ದೇಶದ ಉಪಯುಕ್ತ ನಾಗರಿಕರಾಗಿ ಭಾಗವಹಿಸಲು ಅಗತ್ಯವಾದ ಸೇವೆಗಳನ್ನು ಮತ್ತು ಸೌಲಭ್ಯಗಳನ್ನು ಒದಗಿಸುವುದು ರಾಜ್ಯದ ಹಾಗೂ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ. ಸದರಿ ಅಧಿನಿಯಮದಲ್ಲಿ ಅಂಗವಿಕಲರ ಹಕ್ಕು ಮತ್ತು ಸೌಲಭ್ಯಗಳನ್ನು ಗುರುತಿಸಿದ್ದು ಅವುಗಳನ್ನು ಜಾರಿಗೊಳಿಸಲಾಗುತ್ತಿದೆ. ಅಂಗವಿಕಲತೆ/ ಅಂಗವಿಕಲ ವ್ಯಕ್ತಿಗಳಿಗೆ ಸಂಬಂಧಿಸಿದ ಕಡತಗಳನ್ನು / ಪ್ರಸ್ತಾವನೆಗಳನ್ನು ಸಂಬಂಧಪಟ್ಟ ಇಲಾಖೆಗಳ ಕಾಲಮಿತಿಯೊಳಗೆ ವಿಲೇವಾರಿ ಮಾಡಿದಲ್ಲಿ ಈ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸಾಧ್ಯವಾಗುತ್ತದೆ.

ಆದ್ದರಿಂದ ಅಂಗವಿಕಲತೆಗೆ / ಅಂಗವಿಕಲ ವ್ಯಕ್ತಿಗಳಿಗೆ ಸಂಬಂಧಿಸಿದ ಕಡತಗಳನ್ನು / ಪ್ರಸ್ತಾವನೆಗಳನ್ನು/ಪ್ರಕರಣಗಳನ್ನು ಅವು ಸ್ವೀಕೃತಿಯಾದ ದಿನಾಂಕದಿಂದ ಆಯಾ ಇಲಾಖೆಯವರು ಒಂದು ತಿಂಗಳೊಳಗಾಗಿ ವಿಲೇವಾರಿ ಮಾಡತಕ್ಕದ್ದು ಹಾಗೂ ಕೈಗೊಂಡ ಕ್ರಮದ ಬಗ್ಗೆ ಸಂಬಂಧಿಸಿದ ವ್ಯಕ್ತಿಗಳಿಗೆ / ಸಂಸ್ಥೆಗಳಿಗೆ ಮಾಹಿತಿಯನ್ನು ನೀಡಬೇಕೆಂದು ಸೂಚಿಸಲಾಗಿದೆ.

(ಕೆ.ಕೆ. ಮಿಶ್ರ)
ಮುಖ್ಯ ಕಾರ್ಯದರ್ಶಿಗಳು

ಪ್ರತಿ ಮಾಹಿತಿಗಾಗಿ

ಆಯುಕ್ತರು, ಅಂಗವಿಕಲ ಅಧಿನಿಯಮಗಳು, ಬೆಂಗಳೂರು